ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	442(575).
ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	11-12-2020.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು;	ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿನ ವಸತಿ ಶಾಲೆಗಳ ವಿವರ ಈ ಕೆಳಕಂಡಂತಿದೆ:
ಆ.	ಸನಿವಾಸಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರರಿಗೆ ಕಾಲ್ಪನಿಕ ವೇತನ ಬಡ್ತಿ (ಟೈಂ ಬಾಂಡ್) ನೀಡಲಾಗುತ್ತಿದೆಯೇ ;	ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜು ಮತ್ತು ಮಾದರಿ ವಸತಿ ಶಾಲೆ (ನವೋದಯ)ಗಳಲ್ಲಿನ ಬೋಧಕ/ಬೋಧಕೇತರ ಸಿಬ್ಬಂದಿಗಳು 2016-17 ನೇ ಸಾಲಿನಿಂದ ನೇರ ನೇಮಕಾತಿ ಮೂಲಕ ನೇಮಕಾತಿ ಹೊಂದಿರುವುದರಿಂದ ಇವರು ಕಾಲ್ಪನಿಕ ವೇತನ ಬಡ್ತಿಗೆ ಅರ್ಹರಿರುವುದಿಲ್ಲ.
ಇ	ಸನಿವಾಸಿ ವಸತಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು; (ವರ್ಗವಾರು ವಿವರ ನೀಡುವುದು.)	ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ವಿವರ:

(ಅ) ಉತ್ತರದ ಕೋಷ್ಟಕ:

ಕ್ರ.ಸಂ	ವಸತಿ ಶಾಲೆ	ಶಾಲೆಗಳ ಸಂಖ್ಯೆ
1	ಮೊರಾರ್ಜಿ ದೇಸಾಯಿ ವಸತಿ ಶಾಲೆ	100
2	ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು	21
3	ಮಾದರಿ ವಸತಿ ಶಾಲೆ (ನವೋದಯ)	08
4	ಸರ್ಕಾರಿ ಮುಸ್ಲಿಂ ವಸತಿ ಶಾಲೆ.	05
	ಒಟ್ಟು	134

(ಇ) ಉತ್ತರದ ಕೋಷ್ಟಕ:

ಕ್ರ.ಸಂ	ವಸತಿ ಶಾಲೆ	ಖಾಲಿ ಇರುವ ಬೋಧಕ/ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ
1	ಮೊರಾರ್ಜಿ ದೇಸಾಯಿ ವಸತಿ ಶಾಲೆ	1463
2	ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು	305
3	ಮಾದರಿ ವಸತಿ ಶಾಲೆ (ನವೋದಯ)	286
4	ಸರ್ಕಾರಿ ಮುಸ್ಲಿಂ ವಸತಿ ಶಾಲೆ.	39
	ಒಟ್ಟು	2093

ಈ	ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ನೇರ ನೇಮಕಾತಿಯಡಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ ಹಾಗೂ ಈಗಾಗಲೇ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿರುವ ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಆರ್ಥಿಕ ಇಲಾಖೆಯ ಅನುಮತಿ ಕೋರಲಾಗಿದೆ.

ಸಂಖ್ಯೆ: **MWD 187 LMQ 2020**

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು